ಎ-72-(105)

ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ ರವರು ನಿಯಮ 73 ರಡಿಯಲ್ಲಿ ಮಂಡಿಸಿರುವ ಗಮನಸೆಳೆಯುವ ಸೂಚನೆಗೆ ಉತ್ತರ.

ಸೂಚನೆ:

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಹಲವು ಯೋಜನೆಗಳ ಕಾಮಗಾರಿಗಳು ಪೂರ್ಣಗೊಂಡು ವರ್ಷಗಳೇ ಕಳೆದರೂ ಮಂಜೂರಾಗಿದ್ದ ಕಾಮಗಾರಿಗಳಿಗೆ ಅನುದಾನದ ಹಣವೇ ಬಿಡುಗಡೆಯಾಗುತ್ತಿಲ್ಲ. ಸರ್ಕಾರದ ನಿಯಮಾವಳಿಗಳನ್ವಯ ಕಾಮಗಾರಿಗಳನ್ನು ಪೂರ್ಣಗೊಳಿಸಿ, ಪರಿಶೀಲಿಸಿ, ಗಾಂಧಿ ಸಾಕ್ಷಿಯಲ್ಲಿ ಅಪಲೋಡ್ ಕೂಡ ಮಾಡಿ ವರ್ಷಗಳುರುಳಿದರೂ ಕೆಲಸ ಮಾಡಿದವರಿಗೆ ಹಣ ಬಿಡುಗಡೆ ಮಾಡದಿರುವ ಬಗ್ಗೆ ವಿಚಾರವನ್ನು ಸರ್ಕಾರದ ಗಮನ ಸೆಳೆಯಬಯಸುತ್ತೇನೆ.

ಉತ್ತರ:

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಲೆಕ್ಕ ಶೀರ್ಷಿಕೆ 5054 ಮತ್ತು 3054 ರಡಿ ಈ ಹಿಂದಿನ ಸಾಲುಗಳಲ್ಲಿ ಮಂಜೂರಾತಿ ನೀಡಿ ಪೂರ್ಣಗೊಂಡ / ಚಾಲ್ತಿಯಲ್ಲಿರುವ ಕಾಮಗಾರಿಗಳ ಬಾಕಿ ಬಿಲ್ಲುಗಳ ತೀರುವಳಿಗೆ ಅನುದಾನ ಒದಗಿಸುವಂತೆ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಆರ್ಥಿಕ ಇಲಾಖೆಯು ಒದಗಿಸುವ ಅನುದಾನದ ಲಭ್ಯತೆಯನ್ನಾಧರಿಸಿ ಮಂಜೂರಾಗಿದ್ದ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ ಕ್ರಮ ಕೈಗೊಳ್ಳಬೇಕಿದೆ.

ಕೆ.ಎಸ್.ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು